

ಅರುಣ ಪಿ. ಭಟ್ಟ

## ವಾರಭವಿಷ್ಯ: 01.12.2022ರಿಂದ 07.12.2022ರವರೆಗೆ




ಆರಂಭದ ಎರಡು ದಿನದಲ್ಲಿ ಕಾರ್ಯಸಿದ್ಧಿ. ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ. ಮನೆ ಬಾಡಿಗೆಯಿಂದ ಧನಲಾಭವಾಗಲಿದೆ. ರಾಜಕೀಯದವರಿಗೆ ಅಧಿಕಾರ ಕೈ ತಪ್ಪಿ ಹೋಗುವ ಸಾಧ್ಯತೆ ಇದೆ. ಗ್ರಂಥ ರಚನೆಯಲ್ಲಿ ಆಸಕ್ತಿ. ವಾಹನ ಸೌಖ್ಯ. ಮಕ್ಕಳಿಂದ ಮಾನಸಿಕವಾಗಿ ಕಿರಿಕಿರಿ ಅನುಭವಿಸುತ್ತೀರಿ. ಬರತಕ್ಕ ಬಾಕಿ ಬರುವುದು. ಶುಭದಿನ 07. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.

---




ವಾರದ ಪ್ರಾರಂಭದಲ್ಲಿ ಪ್ರವಾಸ ಮುಗಿಸಿ ಸಂತೋಷದಿಂದ ಹಿಂದಿರುಗಲಿದ್ದೀರಿ. ಸಹೋದರಿಯರಿಂದ ಶುಭವಾರ್ತೆ. ಹಸ್ತಾಲಂಕಾರ ವಸ್ತು ಖರೀದಿ. ವಾರ ಮಧ್ಯದಲ್ಲಿ ಜ್ವರ ಪೀಡೆ ವೈದ್ಯಕೀಯ ಖರ್ಚು. ಕೋರ್ಟ್ ಪ್ರಕಣದಲ್ಲಿ ಗೆಲುವು ಸಾಧ್ಯತೆ. ಅವಮಾನಕರ ಪ್ರಸಂಗ. ವಿವಾಹ ಪ್ರಸ್ತಾವದಲ್ಲಿ ಯಶಸ್ಸು. ವಾರಾಂತ್ಯದಲ್ಲಿ ಪರೋಪಕಾರ. ಶುಭದಿನ 01. ಈಶ್ವರನಿಗೆ ತಿಲಾರ್ಚನೆ ಮಾಡಿರಿ.

---




ದೈಹಿಕ ಜಾಡ್ಯ ಅಲರ್ಜಿ ಕಾಡುತ್ತದೆ. ವಿನಾಕಾರಣ ಹೆದರಿಕೆ. ಆದರೆ, ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ಉತ್ತಮ ವಾಗ್ವರಿ ಪ್ರದರ್ಶನ. ಮಾನ–ಸನ್ಮಾನದ ಭಾಗ್ಯ ಇದೆ. ಮೂತ್ರ ಜನಕಾಂಗ ಪೀಡೆ ಸಾಧ್ಯತೆ. ಶುಭದಿನ 02. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.

---




ವಾರದ ಪ್ರಾರಂಭದಲ್ಲಿ ಮನೆಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ ವಿಕ್ರಯದಲ್ಲಿ ವಂಚನೆ ನಡೆಯುವ ಸಂಭವಿದೆ ಜಾಗ್ರತೆವಹಿಸಿ. ವಾರವಿಡೀ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ. ಕಾಲಿಗೆ ನೋವು. ಆಸ್ಪತ್ರೆಗೆ ಖರ್ಚು. ನಿರೀಕ್ಷಿತ ಸ್ಪರ್ಧೆಯಲ್ಲಿ ಯಶಸ್ಸು. ಶುಭದಿನ 06. ಗುರುದತ್ತಾತ್ರೇಯ ಆರಾಧನೆ ಮಾಡಿರಿ.

---




ಶಾರೀರಿಕ ಮಾನಸಿಕ ಉತ್ಸಾಹ ವೃದ್ಧಿಸುವುದು. ಸರಕಾರಿ ಕೆಲಸಗಳು ತ್ವರಿತಗತಿಯಲ್ಲಿ ನಡೆಯುವುದು. ಪರಿಚಿತ ಸ್ತ್ರೀ ವಿರೋಧ ಕಾಣಿಸುವುದು. ಪಶುಗಳ ವಿಕ್ರಿಯದಾರರಿಗೆ ಲಾಭ. ಹೊಟ್ಟೆನೋವಿನ ಪ್ರಸಂಗ. ಅಜ್ಞಾತವಾಸದಿಂದ ಬಿಡುಗಡೆ ಆಗಲಿದೆ. ಮಹತ್ವದ ಮಾತುಕತೆ ನಿಮ್ಮ ಕುಟುಂಬದಲ್ಲಿ ನಡೆಯಲಿದೆ. ಶುಭದಿನ 02. ಹನುಮಾನ್ ಚಾಲೀಸ್ ಪಠಿಸಿರಿ.

---




ಅನಿರೀಕ್ಷಿತ ಖರ್ಚಿನ ಪ್ರಸಂಗ. ಸರಕಾರಿ ಕೆಲಸದಲ್ಲಿ ವ್ಯತ್ಯಯ ಆಗಲಿದೆ. ಸೇವಕರಿಂದ ಹಾನಿ, ತೊಂದರೆ ಆಗಬಹುದು ಎಚ್ಚರಿಕೆಯನ್ನು ತೆಗೆದುಕೊಳ್ಳುವುದು ಕ್ಷೇಮ. ಬಂಧುಗಳಿಗೆ ಆಪತ್ತು. ಮನೆಗೆಲಸ ಅರ್ಧಕ್ಕೆ ನಿಲ್ಲುವುದು. ಪ್ರೇಮ ಪ್ರಸಂಗಗಳಲ್ಲಿ ಭಗ್ನತೆಯ ವೇದನೆ ಕಾಡಬಹುದು. ಅಧಿಕಾರಿಗಳಿಗೆ ಹಿನ್ನಡೆಯಾಗಲಿದೆ. ಶುಭದಿನ 02. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.

---




ವಾರದಲ್ಲಿಯೇ ಉತ್ತಮ ಫಲ ಪ್ರಾಪ್ತಿಯ ರಾಶಿ. ಆಕಸ್ಮಿಕ ಧನಲಾಭ. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವುದು. ಸಂತತಿ ಇಲ್ಲದವರಿಗೆ ಸಂತತಿಯ ಸೂಚನೆ. ವಿವಾಹ ಅಪೇಕ್ಷಿಗಳಿಗೆ ಸಂಗಾತಿ ಲಭ್ಯ. ಮನೆಗೆಲಸದ ಹೊಸ ಸೇವಕರು ಸಿಗುವರು. ವ್ಯಾಪಾರದಲ್ಲಿ ಲಾಭ. ಕುಟುಂಬದ ಸದಸ್ಯರ ಜೊತೆಗೆ ಪ್ರವಾಸ ಮಾಡಲಿದ್ದೀರಿ. ಶುಭದಿನ 03. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---




ಸಾಡೆಸಾತಿಯ ಕೊನೆ ಹಂತ ಪ್ರಾರಂಭವಾಗಿದೆ. ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ಪರದೇಶ ಪ್ರವಾಸಕ್ಕೆ ಸಿದ್ಧತೆ ನಡೆಯುವುದು. ಸರಕಾರಿ ಅಧಿಕಾರ ಪ್ರಾಪ್ತಿಯಾಗುವ ಯೋಗವಿದೆ. ಶಿಕ್ಷಕರಿಗೆ ಪದೋನ್ನತಿಯೊಡನೆ ವರ್ಗಾವಣೆ ಸಂಭವ. ಕುಟುಂಬ ವರ್ಗದಲ್ಲಿ ಅನಾರೋಗ್ಯ. ಪ್ರಾಣಾಪಾಯ ಭೀತಿ. ಶುಭದಿನ 02. ದುರ್ಗಾ ಆರಾಧನೆ ಮಾಡಿರಿ.

---




ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಹಠಾತ್ ಕಾಣೆಯಾಗಬಹುದು. ದೂರದಿಂದ ಅಶುಭವಾರ್ತೆ ಬರುವುದು. ದೈನಂದಿನ ಕೆಲಸಗಳು ಸರಾಗವಾಗಿ ನಡೆಯುತ್ತವೆ. ಹಿರಿಯ ಅಧಿಕಾರಿಗಳ ದಿಢೀರ್ ಆಗಮನ. ಸ್ತ್ರೀ ಮೂಲಕ ದ್ರವ್ಯ ಲಾಭ. ದೇವತಾ ಪೂಜೆ ನಡೆಯುವುದು. ಶುಭದಿನ 04. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---




ಅಕಸ್ಮಾತ್ ಪೂರ್ವದಿಕ್ಕಿನಲ್ಲಿ ಅಪಘಾತ ಭಯ. ಕಾಲು ನೋವಿನ ಸಮಸ್ಯೆ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ಮಕ್ಕಳಿಂದ ಶುಭವಾರ್ತೆ. ದಾಂಪತ್ಯದಲ್ಲಿ ಸೌಖ್ಯ. ಹಣಕಾಸಿನ ಲಭ್ಯತೆ. ನಿಮ್ಮ ಮನೆಯಲ್ಲಿ ಶುಭಕಾರ್ಯದ ಯೋಜನೆ ಫಲಪ್ರದವಾಗುವುದು. ಶುಭದಿನ 07. ನವಗ್ರಹ ಸ್ತೋತ್ರ ಮಾಡಿರಿ.

---




ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಶೈಕ್ಷಣಿಕ ಖಾತೆಯಲ್ಲಿ ಕೆಲಸದಲ್ಲಿರುವವರಿಗೆ ತಾತ್ಕಾಲಿಕ ಬಡ್ತಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಕೈಗೊಂಡ ಕೆಲಸಗಳಲ್ಲಿ ನಿರೀಕ್ಷೆಗಿಂತ ಲಾಭ. ಗುತ್ತಿಗೆದಾರರು ಉತ್ತಮ ಧನ ಲಾಭ ಕಾಣುವಿರಿ. ಮಿತ್ರರಿಂದ ವಂಚನೆ ಸಂಭವ. ಮಕ್ಕಳ ಅನಾರೋಗ್ಯ. ಶುಭದಿನ 04. ನಾಗಫಣಿ ಪೂಜೆ ಕ್ಷೀರಾಭಿಷೇಕ ಮಾಡಿರಿ.

---




ವಿನಾಕಾರಣ ಮಿತ್ರರು ಶತ್ರುಗಳಾಗುವರು. ಮೇಲಧಿಕಾರಿಗಳಿಂದ ಭಯದ ನೊಟೀಸು ಬರಬಹುದು. ಕಲಾವಿದರಿಗೆ, ಸಂಗೀತಗಾರರಿಗೆ ವಾರದ ಮೊದಲರ್ಧ ಉತ್ತಮ. ಸೊಂಟನೊವು ಕಾಣಿಸುವುದು. ಮಕ್ಕಳ ಆರೋಗ್ಯದಲ್ಲಿ ಕೊಂಚ ಪ್ರಗತಿ. ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಹಿನ್ನಡೆ. ವಾಹನ ಚಾಲಕರಿಗೆ ಎಚ್ಚರ ಅಗತ್ಯ. ಕೆಟ್ಟ ಜನರಿಂದ ಧನಪ್ರಾಪ್ತಿ. ಕುಟುಂಬ ಸೌಖ್ಯ. ಶುಭದಿನ 01. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.